# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆರಡನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ: 24ನೇ ನವೆಂಬರ್, 2016**
**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

## 02. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀಮತಿ ಮೋಟಮ್ಮ ಹಾಗೂ ಶ್ರೀ ಕೆ.ಸಿ. ಕೊಂಡಯ್ಯ** ಅವರುಗಳು ರಾಜ್ಯದಲ್ಲಿ ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಇಲಾಖೆಯ ವಸತಿ ನಿಲಯಗಳಲ್ಲಿ 'ಡಿ' ಗ್ರೂಪ್ ಹುದ್ದೆಗಳಿಗೆ ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲು ಸರ್ಕಾರವು ಮುಂದಾಗಿರುವುದರಿಂದ, ಹಲವಾರು ವರ್ಷಗಳಿಂದ ಹೊರಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಬೀದಿ ಪಾಲಾಗುವ ಕುರಿತು **ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ಪುಟ್ಟಣ್ಣ** ಅವರು ಸರ್ವೋಚ್ಛ ನ್ಯಾಯಾಲಯದ ತೀರ್ಪಿನಂತೆ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಶೇಕಡ 55ಕ್ಕಿಂತ ಕಡಿಮೆ ಅಂಕಪಡೆದು ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರನ್ನು ಖಾಯಂಗೊಳಿಸುವ ಬಗ್ಗೆ **ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರ** ಗಮನ ಸೆಳೆಯುವುದು.

## 03. ನಿಯಮ 330ರ ಮೇರೆಗೆ

**ಶ್ರೀಯುತರುಗಳಾದ: ಅರುಣ ಶಹಾಪುರ, ಬಸವರಾಜ ಹೊರಟ್ಟಿ ಹಾಗೂ ಪುಟ್ಟಣ್ಣ** ಅವರುಗಳು ಅನುದಾನಿತ ಐ.ಟಿ.ಐ. ಶಿಕ್ಷಣ ಸಂಸ್ಥೆಗಳು ಬೋಧನಾ ಶುಲ್ಕವನ್ನು ಸರ್ಕಾರಕ್ಕೆ ಜಮೆ ಮಾಡದ ಕಾರಣ ಕಾಲೇಜಿನ ಸಿಬ್ಬಂದಿ ವರ್ಗದವರ ವೇತನವನ್ನು ಜುಲೈ 2016 ರಿಂದ ತಡೆಹಿಡಿದಿರುವುದರಿಂದ ಶಿಕ್ಷಕರು ಸಂಕಷ್ಟಕ್ಕೆ ಸಿಲುಕಿರುವುದರಿಂದ ಕೂಡಲೇ ವೇತನ ಬಿಡುಗಡೆ ಮಾಡುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಕಾರ್ಮಿಕ ಸಚಿವರು)**

..2

**೦4. ಮಹದಾಯಿ ಹಾಗೂ ಕಳಸಾ ಬಂಡೂರಿ ಯೋಜನೆಗಳ ನೀರಿನ ಸಮಸ್ಯೆಗಳ ಬಗ್ಗೆ ಚರ್ಚೆ**

**೦5. ಅರ್ಧ ಗಂಟೆ ಕಾಲಾವಧಿ ಚರ್ಚೆ**

ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿನ ಪಟ್ಟಣ ಪಂಚಾಯ್ತಿ ಮತ್ತು ನಗರ ಸಭೆ, ಪುರಸಭೆ ಕುರಿತು ದಿನಾಂಕ: 22.11.2016ರ ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ: 91(152)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಅರುಣ ಶಹಾಪುರ** ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

ಆ) ಹೆದ್ದಾರಿ ಟೋಲ್‌ನಲ್ಲಿ ಆಂಬುಲೆನ್ಸ್ ಹಾಗೂ ಗಣ್ಯವ್ಯಕ್ತಿಗಳಿಗೆ ಪ್ರತ್ಯೇಕ ದ್ವಾರ ನಿರ್ಮಿಸುವ ಕುರಿತು ದಿನಾಂಕ: 22.11.2016ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 19(222)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀಯುತರುಗಳಾದ: ಕೆ.ಎಸ್. ಈಶ್ವರಪ್ಪ, ಮಾನ್ಯ ವಿರೋಧ ಪಕ್ಷದ ನಾಯಕರು, ಬಸವರಾಜ ಹೊರಟ್ಟಿ, ಆರ್. ಚೌಡರೆಡ್ಡಿ ತೂಪಲ್ಲಿ ಹಾಗೂ ಇತರರಿಂದ** ಅರ್ಧಗಂಟೆ ಕಾಲಾವಧಿ ಚರ್ಚೆ.

**ಶ್ರೀನಿವಾಸ**
**ಕಾರ್ಯದರ್ಶಿ**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.

**www.kla.kar.nic.in/council.htm**